# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 25/07/2019

---

# ಸರ್ಕಾರಿ ಹುದ್ದೆ: ಆಯ್ಕೆ ಪ್ರಕ್ರಿಯೆ ಆರಂಭಿಸಲು ಆಗ್ರಹ

ಉವಾ 25/7/19

**ಬೆಂಗಳೂರು:** ರಾಜ್ಯದಲ್ಲಿ ಖಾಲಿ ಇರುವ ಎರಡು ಲಕ್ಷಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳಿಗೆ ಶೀಘ್ರ ಆಯ್ಕೆ ಪ್ರಕ್ರಿಯೆ ಆರಂಭಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಆ. ದೇವೇಗೌಡ ಸರ್ಕಾರವನ್ನು ಆಗ್ರಹಿಸಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ನೌಕರರ ಕೇಂದ್ರ ಸಂಘವು ಮಂಗಳವಾರ ಆಯೋಜಿಸಿದ್ದ 'ರಾಜ್ಯ ನೌಕರರ ಸಂಘದ ನೂತನ ಪದಾಧಿಕಾರಿಗಳ ಅಭಿನಂದನಾ ಸಮಾರಂಭ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಎರಡು ಲಕ್ಷಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳು ಖಾಲಿ ಇವೆ. ಅವುಗಳ ಭರ್ತಿಗೆ ರಾಜ್ಯ ಸರ್ಕಾರ ಮುಂದಾಗಬೇಕು. ಇನ್ನು ನೌಕರಗೆ ಸಮಸ್ಯೆಯಾಗಿರುವ ನೂತನ ಪಿಂಚಣಿ ಯೋಜನೆ ರದ್ದುಪಡಿಸಿ, ಹಳೇ ಪಿಂಚಣಿ ಯೋಜನೆಯನ್ನೇ ಜಾರಿಗೊಳಿಸಬೇಕು. ಜತೆಗೆ ವರ್ಗಾವಣೆಯಲ್ಲಿ ಪಾರದರ್ಶಕತೆ, ಸೇವಾ ಹಿರಿತನ ಹಾಗೂ ವಿದ್ಯಾರ್ಹತೆ ಆಧರಿಸಿ ಬಡ್ತಿ ನೀಡುವುದು, ಸರ್ಕಾರಿ ಕಚೇರಿಗಳಲ್ಲಿ ಕನ್ನಡ ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿದರು. ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಕ್ಷರಿ ಮಾತನಾಡಿದರು. ಈ ವೇಳೆ ಸಂಘದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ನೌಕರರ ಕೇಂದ್ರ ಸಂಘದ ಅಧ್ಯಕ್ಷ ಎ. ಪುಟ್ಟಸ್ವಾಮಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ಬಿ.ಕೆ. ಗಿರಿಗೌಡ ಉಪಸ್ಥಿತರಿದ್ದರು.

1